ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಪೊಲೀಸ್ ದೂರು ಪ್ರಾಧಿಕಾರ ರಚನೆಯ ಬಗ್ಗೆ

ಡಾ|| ಚಂದ್ರಶೇಖರ್ ಬಿ. ಪಾಟೀಲ್(ಪದವೀಧರರ ಕ್ಷೇತ್ರ) -

382 (346) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಎಷ್ಟು ಪೊಲೀಸ್ ದೂರು ಪ್ರಾಧಿಕಾರಗಳನ್ನು ರಚನೆ ಮಾಡಲಾಗಿದೆ; ಇಲ್ಲಿಯವರೆಗೆ ಈ ದೂರು ಪ್ರಾಧಿಕಾರಗಳಿಗೆ ಬಂದ ದೂರುಗಳ ಸಂಖ್ಯೆ ಎಷ್ಟು; ಎಷ್ಟು ದೂರುಗಳಿಗೆ ಪರಿಹಾರ ಕಲ್ಪಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪೊಲೀಸ್ ದೂರು ಪ್ರಾಧಿಕಾರಕ್ಕೆ ಸದಸ್ಯರಗಳನ್ನು ಭರ್ತಿ ಮಾಡಲಾಗಿದೆಯೇ; ಎಷ್ಟು ಹುದ್ದೆಗಳು ಪ್ರಸ್ತುತ ಖಾಲಿ ಇವೆ; (ವಿವರ ನೀಡುವುದು)

(ಇ) ಪೊಲೀಸ್ ದೂರು ಪ್ರಾಧಿಕಾರಕ್ಕೆ ಅಧಿಕಾರೇತರ ಸದಸ್ಯರನ್ನು ನೇಮಕ ಮಾಡಲು ಅವಕಾಶ ಇದೆಯೇ; ಹಾಗಾದ್ದಲ್ಲಿ, ಪತ್ರಿಕೋದ್ಯಮ, ನ್ಯಾಯಾಂಗ ಕ್ಷೇತ್ರದಲ್ಲಿ ಸೇವೆ ಸಲ್ಲಿಸದವರನ್ನು ಏಕೆ ಸದಸ್ಯರನ್ನಾಗಿ ನೇಮಕ ಮಾಡಲು ಕ್ರಮ ಕೈಗೊಂಡಿರುವುದಿಲ್ಲ;

(ಈ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ದಾಖಲಾದ ವಿವಿಧ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು; (ಪ್ರಕರಣವಾರು ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವುಗಳನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?